# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಮಂಗಳವಾರ, ೦೯ ಸೆಪ್ಟೆಂಬರ್, ೨೦೨೫ (ಭಾದ್ರಪದ ೧೮, ಶಕವರ್ಷ ೧೯೪೭)<br>BENGALURU, TUESDAY, 09 SEPTEMBER, 2025 ( BHADRAPADA 18, SHAKAVARSHA 1947) | ನಂ. ೫೫೦<br>No.550 |
|---|---|---|


## PARLIAMENTARY AFFAIRS AND LEGISLATION SECRETARIAT

## NOTIFICATION

## NO: DPAL 64 SHASANA 2025, BENGALURU, DATED:09.09.2025

The Karnataka Ports (Landing and Shipping Fees)(Amendment) Bill, 2025 ಇದಕ್ಕೆ 2025ರ ಸೆಪ್ಟೆಂಬರ್ ತಿಂಗಳ 09ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2025ರ ಕರ್ನಾಟಕ ಅಧಿನಿಯಮ ಸಂಖ್ಯೆ:46 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

# KARNATAKA ACT NO.46 OF 2025

(First Published in the Karnataka Gazette Extra-ordinary on the 09th day of September, 2025)

## THE KARNATAKA PORTS (LANDING AND SHIPPING FEES) (AMENDMENT) ACT, 2025

(Received the assent of the Governor on the 09th day of September, 2025)

An Act further to amend the Karnataka ports (Landing and Shipping Fees) Act, 1961.

Whereas it is expedient further to amend the Karnataka Ports (Landing and Shipping Fees) Act, 1961 (Karnataka Act 20 of 1961) for the purposes hereinafter appearing:

Be it enacted by the Karnataka State Legislature in the seventy sixth year of the Republic of India as follows:-

**1. Short title and commencement.-** (1) This Act may be called the Karnataka Ports (Landing and Shipping Fees)(Amendment) Act, 2025.

(2) It shall come into force on such date as the State Government may, by notification in the Official Gazette, appoint.

**2. Amendment of section 3.-** In section 3 of the Karnataka Ports (Landing and Shipping Fees) Act, 1961 (Karnataka Act 20 of 1961) (hereinafter referred to as the Principal Act), in sub-section (1),-

(i) after the words "Fees at such rates and subject to such conditions", the words "and to revise the fees at such intervals of time", shall be inserted; and

(ii) after the second proviso, the following proviso shall be inserted, namely:-

"Provided also that, if fees are not revised at such intervals of time, the Government may, by notification increase or decrease fees at such percentage, considering the inflation and such other conditions as may be prescribed."

**3. Amendment of section 10.-** In the principal Act, in section 10, in sub-section (1), the words, "After previous publication", shall be omitted.

By Order and in the name of
the Governor of Karnataka,

**G.SRIDHAR**
Secretary to Government
Department of Parliamentary
Affairs and Legislation

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ
## ಅಧಿಸೂಚನೆ
## ಸಂಖ್ಯೆ: ಸಂವ್ಯಶಾಇ 64 ಶಾಸನ 2025, ಬೆಂಗಳೂರು, ದಿನಾಂಕ:09.09.2025

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022 (2023 ರ ಕರ್ನಾಟಕ ಅಧಿನಿಯಮ ಸಂಖ್ಯೆ: 13) ರ ಪ್ರಕರಣ 6 ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ the Karnataka Ports (Landing and Shipping Fees) (Amendment) Act, 2025 (Karnataka Act 46 of 2025) ನ ಭಾಷಾಂತರವನ್ನು ಅಧಿಕೃತ ಕನ್ನಡ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

### 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ:46

(2025 ರ ಸೆಪ್ಟೆಂಬರ್ ತಿಂಗಳ 09ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

### ಕರ್ನಾಟಕ ಬಂದರುಗಳ (ಸರಕನ್ನು ಹಡಗಿನಿಂದ ಇಳಿಸುವ ಮತ್ತು ಹಡಗಿಗೆ ತುಂಬುವ ಫೀಜುಗಳು) (ತಿದ್ದುಪಡಿ) ಅಧಿನಿಯಮ, 2025

(2025 ರ ಸೆಪ್ಟೆಂಬರ್ ತಿಂಗಳ 09ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ಬಂದರುಗಳ (ಸರಕನ್ನು ಹಡಗಿನಿಂದ ಇಳಿಸುವ ಮತ್ತು ಹಡಗಿಗೆ ತುಂಬುವ ಫೀಜುಗಳು) ಅಧಿನಿಯಮ, 1961ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಬಂದರುಗಳ (ಸರಕನ್ನು ಹಡಗಿನಿಂದ ಇಳಿಸುವ ಮತ್ತು ಹಡಗಿಗೆ ತುಂಬುವ ಫೀಜುಗಳು) ಅಧಿನಿಯಮ, 1961 (1961ರ ಕರ್ನಾಟಕ ಅಧಿನಿಯಮ 20)ನ್ನು, ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಬಂದರುಗಳ (ಸರಕನ್ನು ಹಡಗಿನಿಂದ ಇಳಿಸುವ ಮತ್ತು ಹಡಗಿಗೆ ತುಂಬುವ ಫೀಜುಗಳು) (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಕರ್ನಾಟಕ ಬಂದರುಗಳ (ಸರಕನ್ನು ಹಡಗಿನಿಂದ ಇಳಿಸುವ ಮತ್ತು ಹಡಗಿಗೆ ತುಂಬುವ ಫೀಜುಗಳು) ಅಧಿನಿಯಮ, 1961 (1961ರ ಕರ್ನಾಟಕ ಅಧಿನಿಯಮ 20)ರ (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ), 3ನೇ ಪ್ರಕರಣದ, (1)ನೇ ಉಪ-ಪ್ರಕರಣದಲ್ಲಿ,-

(i) "ಅಂಥ ದರಗಳಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ಫೀಜುಗಳನ್ನು" ಎಂಬ ಪದಗಳ ತರುವಾಯ "ಮತ್ತು ಅಂಥ ಸಮಯದ ಮಧ್ಯಂತರ ಅವಧಿಗಳಲ್ಲಿ ಫೀಜುಗಳನ್ನು ಪರಿಷ್ಕರಿಸಲು" ಎಂಬ ಪದವನ್ನು ಸೇರಿಸತಕ್ಕದ್ದು;

(ii) ಎರಡನೇ ಪರಂತುಕದ ತರುವಾಯ, ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಅಲ್ಲದೆ ಪರಂತು ನಿಯಮಿಸಬಹುದಾದಂಥ ಸಮಯದ ಮಧ್ಯಂತರ ಅವಧಿಯಲ್ಲಿ ಫೀಜುಗಳನ್ನು ಪರಿಷ್ಕರಿಸದಿದ್ದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ಹಣದುಬ್ಬರ ಮತ್ತು ಇತರ ಷರತ್ತುಗಳನ್ನು ಪರಿಗಣಿಸಿ ಅಂಥ ಶೇಕಡವಾರು ಫೀಜುಗಳನ್ನು ಹೆಚ್ಚಿಸಬಹುದು ಅಥವಾ ಕಡಿಮೆ ಮಾಡಬಹುದು".

**3. ಪ್ರಕರಣ 10ರ ತಿದ್ದುಪಡಿ.-** ಮೂಲ ಅಧಿನಿಯಮದ, 10ನೇ ಪ್ರಕರಣದ, (1)ನೇ ಉಪಪ್ರಕರಣದಲ್ಲಿ, "ಪೂರ್ವ ಪ್ರಕಟಣೆಯ ತರುವಾಯ" ಎಂಬ ಪದಗಳನ್ನು ಬಿಟ್ಟುಬಿಡತಕ್ಕದ್ದು;

The above translation of the Karnataka Ports (Landing and Shipping Fees)(Amendment) Act, 2025 (Karnataka Act 46 of 2025) shall be an authoritative text in Kannada language under section 6 of the Kannada Language Comprehensive Development Act, 2022 (Karnataka Act No. 13 of 2023).

**ಥಾವರ್‌ಚಂದ್ ಗೆಹ್ಲೋಟ್**
ಕರ್ನಾಟಕದ ರಾಜ್ಯಪಾಲರು

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**ಜಿ. ಶ್ರೀಧರ್**
**ಸರ್ಕಾರದ ಕಾರ್ಯದರ್ಶಿ**
**ಸಂಸದೀಯ ವ್ಯವಹಾರಗಳು ಮತ್ತು**
**ಶಾಸನ ರಚನೆ ಇಲಾಖೆ.**

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH